# ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು-577 101

ಸಂಖ್ಯೆ: ಇಎಸ್‌ಟಿ(2) ಸಿಆರ್/ 127/2016-17 ದಿನಾಂಕ:23-02-2017

## ಗ್ರಾಮಲೆಕ್ಕಿಗರ ಅಂತಿಮ ಆಯ್ಕೆ ಅಧಿಸೂಚನೆ

ವಿಷಯ: ಚಿಕ್ಕಮಗಳೂರು ಜಿಲ್ಲೆಯಲ್ಲಿ ಖಾಲಿ ಇರುವ 22 ಹುದ್ದೆಗಳು ಹಾಗೂ 9 ಹಿಂಬಾಕಿ ಹುದ್ದೆಗಳು ಸೇರಿ ಒಟ್ಟು 31 ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅಂತಿಮ ಆಯ್ಕೆಯ ಅಧಿಸೂಚನೆ ಹೊರಡಿಸುವ ಬಗ್ಗೆ.

ಉಲ್ಲೇಖ: ಈ ಕಾರ್ಯಾಲಯದ ಅಧಿಸೂಚನೆಯ ಸಮಸಂಖ್ಯೆ ದಿನಾಂಕ 10-11-2016

*****

ಈ ಕಾರ್ಯಾಲಯದ ಉಲ್ಲೇಖಿತ ಅಧಿಸೂಚನೆಯ ದಿನಾಂಕ 10-11-2016ರಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ 2015-16ನೇ ಸಾಲಿನ ನೇಮಕಾತಿ ಪ್ರಕ್ರಿಯೆಯಲ್ಲಿ, ನೇಮಕಾತಿ ಪ್ರಕ್ರಿಯೆಯ ನಂತರ ಉಳಿದ 09 ಹಿಂಬಾಕಿ ಹುದ್ದೆಗಳು ಸೇರಿ ನಂತರ ಅಂತರಜಿಲ್ಲಾ ವರ್ಗಾವಣೆ, ವಯೋ ನಿವೃತ್ತಿ, ಮುಂಬಡ್ತಿ, ಮರಣ ಇನ್ನಿತರೆ ಕಾರಣಗಳಿಂದ ಒಟ್ಟು 22 ಹುದ್ದೆಗಳು ಸೇರಿ 31 ಹುದ್ದೆಗಳ ಭರ್ತಿ ಮಾಡುವ ಸಂಬಂಧ 1:1 ಅನುಪಾತದಲ್ಲಿ ವರ್ಗವಾರು ಮತ್ತು ಶೇಕಡಾವಾರು ನಿಯಮಾನುಸಾರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ 31-01-2017 ರಂದು ಹೊರಡಿಸಲಾಗಿತ್ತು.

ರೋಸ್ಟರ್ ನಿಯಮದನ್ವಯ ವರ್ಗವಾರು ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಆಧಾರದ ಮೇಲೆ ಅಂತಿಮ ಆಯ್ಕೆಪಟ್ಟಿಯನ್ನು ಪ್ರಚುರಪಡಿಸಲಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು ಈ ಕಛೇರಿಯ ಪ್ರಕಟಣಾ ಫಲಕದಲ್ಲಿ, ಉಪವಿಭಾಗಾಧಿಕಾರಿ, ಚಿಕ್ಕಮಗಳೂರು/ ತರೀಕೆರೆ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಕಛೇರಿಯ ಪ್ರಕಟಣಾ ಫಲಕದಲ್ಲಿ ಮತ್ತು ಚಿಕ್ಕಮಗಳೂರು ಜಿಲ್ಲಾ ವೆಬ್‌ಸೈಟ್ http://www.chickmagalur.nic.in/ ಇದರಲ್ಲಿ ವೀಕ್ಷಿಸಬಹುದಾಗಿದೆ.

Sd/- 23/2/17

ಅಧ್ಯಕ್ಷರು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು
ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ
ಚಿಕ್ಕಮಗಳೂರು-577101.

**ಪ್ರತಿಯನ್ನು**

1) ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಅವಗಾಹನೆಗೆ ಸಲ್ಲಿಸಿದೆ.
4) ರಾಜ್ಯ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ, ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5) ಉಪವಿಭಾಗಾಧಿಕಾರಿ, ಚಿಕ್ಕಮಗಳೂರು/ತರೀಕೆರೆ ಹಾಗೂ ಜಿಲ್ಲೆಯ ಎಲ್ಲಾ ತಹಸೀಲ್ದಾರರುಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
6) ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಚಿಕ್ಕಮಗಳೂರು ಇವರಿಗೆ ಕಳುಹಿಸುತ್ತಾ, ಮೇಲಿನ ಪ್ರಕಟಣೆಯನ್ನು ಸುದ್ದಿ ರೂಪದಲ್ಲಿ ದೈನಿಕಗಳಲ್ಲಿ ಪ್ರಕಟಿಸಲು ಕೋರಿದೆ.
7) ಜಿಲ್ಲಾ ವಿಜ್ಞಾನ ಸೂಚನಾಧಿಕಾರಿ, ಜಿಲ್ಲಾ ವಿಜ್ಞಾನ ಸೂಚನ ಕಛೇರಿ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು ಇವರಿಗೆ ಕಳುಹಿಸುತ್ತಾ ಮೇಲಿನ ಪ್ರಕಟಣೆಯನ್ನು ಚಿಕ್ಕಮಗಳೂರು ಜಿಲ್ಲಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
8) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ / ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.